ದಕ್ಷಿಣ ಕನ್ನಡ ಜಿಲ್ಲೆಯ ಮನೆಗಳ ಹಕ್ಕುಪತ್ರ ನೀಡಿಕೆಯ ಬಗ್ಗೆ

41 (207) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಸರ್ಕಾರಿ ಜಾಗದಲ್ಲಿ ಮನೆಗಳನ್ನು ನಿರ್ಮಿಸಿಕೊಂಡು ವಾಸಿಸುತ್ತಿರುವ ಬಡಜನತೆಗೆ ಹಕ್ಕು ಪತ್ರಗಳನ್ನು ನೀಡುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಇವರುಗಳಿಗೆ ಯಾವಾಗ ಹಕ್ಕುಪತ್ರಗಳನ್ನು ನೀಡಲಾಗುವುದು?

ಶ್ರೀ ಜಿ ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಮತ್ತು ಆ) ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 94ಸಿ ಪ್ರಕಾರ ಸರ್ಕಾರಿ ಜಮೀನುಗಳಲ್ಲಿ ದಿನಾಂಕ: 14.04.1998ರ ಪೂರ್ವದಲ್ಲಿ ಮನೆ ಕಟ್ಟಿ ವಾಸ್ತವ್ಯ ಇರುವ ಬಡ ಕುಟುಂಬದವರಿಗೆ ಅಂತಹ ಅನಧಿಕೃತ ಮನೆಗಳನ್ನು ಸಕ್ರಮೀಕರಣಗೊಳಿಸಲು ದಿನಾಂಕ: 31.12.2001 ರೊಳಗೆ ನಮೂನೆ–1 ರಂತೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ ನಿಗದಿತ ಅವಧಿಯಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ ಅರ್ಹತೆ ಅನುಸಾರ ಹಕ್ಕುಪತ್ರ ನೀಡಲು ಅವಕಾಶವಿದೆ.

ದಕ್ಷಿಣ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ 94ಸಿ ರಡಿ ಸ್ವೀಕೃತವಾದ ಒಟ್ಟು 18,270 ಅರ್ಜಿಗಳ ಪೈಕಿ 5,870 ಅರ್ಹ ಪ್ರಕರಣಗಳನ್ನು ಸಕ್ರಮೀಕರಿಸಲಾಗಿದೆ. 12,400 ಅರ್ಜಿಗಳು ತಿರಸ್ಕೃತಗೊಂಡಿರುತ್ತದೆ. ಸಕ್ರಮೀಕರಿಸಲಾದ ಒಟ್ಟು 5,870 ಪ್ರಕರಣಗಳ ಪೈಕಿ ಜನವರಿ 4,967 ಪ್ರಕರಣಗಳಲ್ಲಿ ಹಕ್ಕುಪತ್ರ ವಿತರಣೆಯಾಗಿರುತ್ತದೆ.

ಭೂಮಿ ಯೋಜನೆ

42 (208) ಶ್ರೀ ಖಾದರ್ ಯು. ಟಿ. (ಮಂಗಳೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭೂಮಿ ಯೋಜನೆ ಹಾಗೂ 11ಇ ನಕ್ಷೆ ನಿಯಮ ಯೋಜನೆಯಿಂದ ಜನರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಬಂದಿದೆ.

ಆ) ಭೂಮಿ ಮತ್ತು 11ಇ ನಕ್ಷೆ ಯೋಜನೆ ಅನುಷ್ಠಾನದ ಸಮಯದಲ್ಲಿ ಸಾರ್ವಜನಿಕರಿಂದ ಕೆಲವು ದೂರುಗಳು ಸ್ವೀಕೃತವಾಗಿರುತ್ತವೆ. ಸಾರ್ವಜನಿಕರ ದೂರುಗಳನ್ನು ಆಧರಿಸಿ ಅವರಿಗೆ ಆಗುತ್ತಿರುವ ಈ ಸಮಸ್ಯೆಗಳನ್ನು ಬಗೆಹರಿಸಲು ಸ್ಥಳೀಯ ಶಾಸಕರು ಮತ್ತು ಜಿಲ್ಲಾಧಿಕಾರಿ ಯವರ ಜೊತೆ ಒಂದು ಸಭೆ ಕರೆದು ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗುವುದು.

ದಕ್ಷಿಣ ಕನ್ನಡ ಜಿಲ್ಲೆಯ ಸಣ್ಣ ನೀರಾವರಿ ಅನುದಾನ ಕುರಿತು

43 (209) ಶ್ರೀ ಯು. ಟಿ. ಖಾದರ್ (ಮಂಗಳೂರು) : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಗೆ ಕಳೆದ 2 ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯಿಂದ ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ಕ್ಷೇತ್ರವಾರು ಬಿಡುಗಡೆ ಮಾಡಿರುವ ಅನುದಾನದ ವಿವರ ಒದಗಿಸುವುದು);

ಆ) ಬಿಡುಗಡೆ ಮಾಡಲಾದ ಅನುದಾನದಲ್ಲಿ ಎಷ್ಟು ಹಣವನ್ನು ಹಾಗೂ ಉಳಿದ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) ವಿವರ ಕೆಳಗಿನಂತಿದೆ.

1) 2007–08 – ರೂ. 660.46 ಲಕ್ಷ
2) 2008–09 – ರೂ.672.80 ಲಕ್ಷ
3) 2009–10 – ರೂ.225.85 ಲಕ್ಷ

ಕ್ಷೇತ್ರವಾರು ಅನುದಾನ ಮತ್ತು ಕಾಮಗಾರಿಗಳಿಗೆ ಮಾಡಿದ ವೆಚ್ಚದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ವೆಚ್ಚದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.